ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 18/12/20

# ಗಟ್ಟಿ ಸಾಧನೆಯ ಜಟ್ಟಿ ಆರ್‌ಎನ್‌ಶೆಟ್ಟಿ ಇನ್ನಿಲ್ಲ

**ಬೆಂಗಳೂರು:** ಆರ್‌ಎನ್‌ಎಸ್ ಶಿಕ್ಷಣ ಮತ್ತು ಉದ್ಯಮ ಸಮೂಹಗಳ ಸ್ಥಾಪಕ ಆರ್.ಎನ್.ಶೆಟ್ಟಿ (92) ಗುರುವಾರ ನಸುಕಿನ 2 ಗಂಟೆ ಸುಮಾರಿನಲ್ಲಿ ಹೃದಯಾಘಾತದಿಂದ ನಿಧನ ಹೊಂದಿದರು. ಪತ್ನಿ, ಮೂವರು ಗಂಡು, ನಾಲ್ವರು ಹೆಣ್ಣು ಮಕ್ಕಳನ್ನು ಅಗಲಿದ್ದಾರೆ.




ಗುರುವಾರ ಮಧ್ಯಾಹ್ನ 2 ಗಂಟೆಯಿಂದ ಬೆಂಗಳೂರಿನ ಉತ್ತರಹಳ್ಳಿಯಲ್ಲಿರುವ ಆರ್.ಎನ್.ಎಸ್ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಸಾರ್ವಜನಿಕರ ದರ್ಶನಕ್ಕೆ ಅವಕಾಶ ನೀಡಲಾಗಿತ್ತು. ಸಂಜೆ ಅಂತ್ಯಸಂಸ್ಕಾರ ನೆರವೇರಿತು. ಆರ್.ಎನ್.ಶೆಟ್ಟಿ ಅವರು ಧಾರ್ಮಿಕ, ಸಾಂಸ್ಕೃತಿಕ, ಆಧ್ಯಾತ್ಮಿಕ, ವೈದ್ಯಕೀಯ, ಆತಿಥ್ಯ, ವಸತಿ, ಔದ್ಯಮಿಕ, ಔದ್ಯೋಗಿಕ, ವಾಣಿಜ್ಯ, ಶೈಕ್ಷಣಿಕ, ಮೂಲಸೌಕರ್ಯ, ವಿದ್ಯುತ್ ಹಾಗೂ ನೀರಾವರಿ ಕ್ಷೇತ್ರ ಸೇರಿದಂತೆ ವಿವಿಧ ರಂಗಗಳಲ್ಲಿ ತೊಡಗಿಸಿಕೊಂಡಿದ್ದರು.

| | |
|---|---|
| ಪೂರ್ಣ ಹೆಸರು: | ರಾಮ ನಾಗಪ್ಪ ಶೆಟ್ಟಿ |
| ಜನನ: | 1928, ಆಗಸ್ಟ್ 15 (ಉತ್ತರ ಕನ್ನಡ ಜಿಲ್ಲೆಯ ಮುರುಡೇಶ್ವರ) |
| ಪತ್ನಿ: | ಸುಧಾ ಶೆಟ್ಟಿ |
| ಮಕ್ಕಳು: | ನವೀನ್, ಸುನೀಲ್, ಸತೀಶ್, ನಾಲ್ವರು ಹೆಣ್ಣು ಮಕ್ಕಳು |
| ವೃತ್ತಿ, ಪ್ರವೃತ್ತಿ: | ಉದ್ಯಮಿ, ಸಮಾಜ ಸೇವಕ, ಧರ್ಮಭೀರು, ಶಿಕ್ಷಣ ಪ್ರೇಮಿ.. |

## ಗಣ್ಯರ ಸಂತಾಪ



ವಿದ್ಯಾದಾನ ಮಾಡುತ್ತ ಸಮಾಜಮುಖಿ, ಧಾರ್ಮಿಕ ಸಂಸ್ಥೆಗಳ ನಿರ್ಮಾತೃವಾಗಿದ್ದ ಮಹಾದಾನಿ ಉದ್ಯಮಿ ಶೆಟ್ಟಿ ಅವರ ನಿಧನದ ಸುದ್ದಿ ತಿಳಿದು ಮನಸ್ಸಿಗೆ ನೋವುಂಟಾಯಿತು. ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ.

–ಎಚ್.ಡಿ.ದೇವೇಗೌಡ ಮಾಜಿ ಪ್ರಧ



ಕೃಷಿಕ ಮನೆತನದ ಜನಿಸಿ, ಉದ್ಯಮ ದತ್ತ ಮುಖ ಮಾ ದ ಆರ್.ಎನ್.ಶೆಟ್ಟಿ ವಿವಿಧ ಕ್ಷೇತ್ರದಲ್ಲಿ ಛಾಪು ಮೂಡಿಸಿದ್ದರು. ಭಗವಂತನು ಅವ ಆತ್ಮಕ್ಕೆ ಶಾಂತಿಯನ್ನು ಕರುಣಿಸಲಿ. ಕುಟುಂಬದವರಿಗೆ ದುಃಖವನ್ನು ಸಹಿಸುವ ಶಕ್ತಿಯನ್ನು ನೀಡಲಿ.

- ಬಿ.ಎಸ್.ಯಡಿಯೂರಪ್ಪ ಮುಖ್ಯಮಂ



ಆರ್.ಎನ್. ಶೆಟ್ಟಿಯವರ ನಿಧನ ವಾರ್ತೆಯನ್ನು ತಿಳಿದು ವಿಷಾದವಾಯಿತು. ಆದರ್ಶ ಜೀವನವನ್ನು ನಡೆಸಿದ ಶೆಟ್ಟಿಯವರ ಜೀವ ಇತರರಿಗೆ ಮಾದರಿ ಆಗಿದೆ. ಅವರ ಆತ್ಮಕ್ಕೆ ಚಿರಶಾಂತಿಯನ್ನು ಕೋರುತ್ತೇನೆ.

– ಡಾ. ಡಿ.ವೀರೇಂದ್ರ ಹೆಗ್ಗಡೆ ಧರ್ಮಾಧಿಕಾರಿಗಳು



ಖ್ಯಾತ ಉದ್ಯಮಿ ಹಾಗೂ ಕೊಡುಗೈ ದಾನಿಯಾಗಿದ್ದ ಆರ್.ಎನ್.ಶೆಟ್ಟಿ ಅವರ ನಿಧನದ ಸುದ್ದಿ ದುಃಖ ತರಿಸಿದೆ. ಸ್ನೇಹಶೀಲರಾಗಿದ್ದ ಶೆಟ್ಟರು, ಬಹುಕಾಲದಿಂದ ನನಗೆ ಆತ್ಮೀಯರಾಗಿದ್ದರು. ಅವರ ಆತ್ಮಕ್ಕೆ ಶಾಂತಿ ಹಾಗೂ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ದೇವರು ನೀಡಲಿ.

–ಸಿದ್ದರಾಮಯ್ಯ ಪ್ರತಿಪಕ್ಷ ನಾಯಕ



ಆರ್.ಎನ್.ಶೆಟ್ಟಿ ಅವರು ಕೇವಲ ಉದ್ಯಮಿಯಾಗಿರಲಿಲ್ಲ, ನೈಜ ದೇಶ ಪ್ರೇಮಿ ಆಗಿದ್ದರು. ಉದ್ಯಮ ಕ್ಷೇತ್ರದಲ್ಲಿ ಸುಮಾರು ಐದು ದಶಕಗಳ ಸುದೀರ್ಘ ಸೇವೆ ಸಲ್ಲಿಸಿರುವ ಅವರು, ಪ್ರಮುಖ ಕಟ್ಟಡಗಳ ನಿರ್ಮಾಣದಲ್ಲಿ ತೊಡಗಿಸಿಕೊಂಡಿದ್ದರು. ದಾನ ಧರ್ಮದಲ್ಲಿ ನಂಬಿಕೆಯಿದ್ದ ಅವರು, ನಮ್ಮನ್ನು ಅಗಲಿರುವುದು ನೋವಿನ ಸಂಗತಿ.

–ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷ



ಕೃಷಿಕ ಮನೆತನದಲ್ಲಿ ಜನಿಸಿ, ಉದ್ಯಮ ದತ್ತ ಮುಖ ಮಾಡಿದ ಅವರು, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಹೋಟೆಲ್ ಉದ್ಯಮದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಶೈಕ್ಷಣಿಕ ಕ್ಷೇತ್ರದಲ್ಲಿ ಕಾಲಿಟ್ಟು ಯುವ ಪೀಳಿಗೆಗೆ ತಮ್ಮದೇ ಕೊಡುಗೆ ನೀಡಿದ್ದರು. ಅವರ ಅಗಲಿಕೆ ತುಂಬಲಾರದ ನಷ್ಟ.

– ವಿಶ್ವೇಶ್ವರ ಹೆಗಡೆ ಕಾಗೇರಿ ವಿಧಾನಸಭಾಧ್ಯಕ್ಷ